# ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ ವಿಜಯಪುರ

ದಿನಾಂಕ: 21-06-2017

ವಿಜಯಪುರ: ಸಂಸ್ಕೃತಿಯ ಉಳಿವಿಗೆ ಮಾನವಿಕಗಳ ಅಧ್ಯಯನ ಅವಶ್ಯಕ. ಇದು ಸಂಸ್ಕೃತಿಯ ಜೀವಂತಿಕೆಗೆ ಕಾರಣವಾಗಿದೆ. ಈ ಸಂದರ್ಭದಲ್ಲಿ ಮಾನವಿಕಗಳಿಗೆ ಇಂದು ಮಹತ್ವ ಕಡಿಮೆಯಾಗುತ್ತಿರುವುದು ವಿಷಾದನೀಯ ಎಂದು ನವದೆಹಲಿಯ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯ ಕನ್ನಡ ಭಾಷಾ ಪೀಠದ ಪ್ರಾಧ್ಯಾಪಕ ಪ್ರೊ.ಪುರುಷೋತ್ತಮ ಬಿಳಿಮಲೆ ಎಂದರು.

ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಜ್ಞಾನಶಕ್ತಿ ಆವರಣದ ಡಾ.ಬಿ.ಆರ್. ಅಂಬೇಡ್ಕರ್ ಅಧ್ಯಯನ ಕೇಂದ್ರದಲ್ಲಿ ವಿವಿಯ 14ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ 'ಕನ್ನಡ ಸಂಶೋಧನೆ ಹಿಡಿಯಬೇಕಿರುವ ಹೊಸ ಹಾದಿಗಳು' ವಿಷಯದ ಕುರಿತು ಅವರು ಮಾತನಾಡಿದರು.

ಗೋಡೆಗಳನ್ನು ಒಡೆಯದಿದ್ದರೆ ನಮ್ಮ ಜ್ಞಾನದ ಪರಿಧಿ ವಿಸ್ತಾರವಾಗುವುದಿಲ್ಲ. ವಸಾಹತುಶಾಹಿಗೆ ಜೋತು ಬೀಳದೆ ಸಂಶೋಧನೆಯಲ್ಲಿ ಭಿನ್ನವಾದ ತಾತ್ವಿಕತೆಯತ್ತ ನಡೆಯಬೇಕಾದುದು ಇಂದಿನ ತುರ್ತಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಅವೈಜ್ಞಾನಿಕ ಗ್ರಂಥಸೂಚಿಯು ಕನ್ನಡ ಸಂಶೋಧನೆಯ ಬಹುದೊಡ್ಡ ಸಮಸ್ಯೆಯಾಗಿದೆ. ಅನ್ಯ ಸಂಸ್ಥೆಗಳಿಗೆ ತೆರಳಿ ಅಲ್ಲಿಯ ಜ್ಞಾನವನ್ನು ಪಡೆಯುವ ಕೊರತೆ ಇದೆ. ಇದಕ್ಕೆ ವಿದ್ಯಾರ್ಥಿಗಳು ಮತ್ತು ಮಾರ್ಗದರ್ಶಕರಿಬ್ಬರೂ ಕಾರಣ. ಇದನ್ನು ತೊಡೆದು ಹಾಕಲು ಮತ್ತೆ ಬದ್ಧತೆಯುಳ್ಳ ಹೊಸ ಸಂಶೋಧನಾ ಪರಂಪರೆಯು ಪ್ರಾರಂಭವಾಗಬೇಕು ಎಂದು ಪ್ರತಿಪಾದಿಸಿದರು.

ಅತಿಥಿಯಾಗಿ ಆಗಮಿಸಿದ್ದ ಮಹಿಳಾ ವಿವಿ ಸಿಂಡಿಕೇಟ್ ಸದಸ್ಯ ರವೀಂದ್ರ ಭಾವಿಕಟ್ಟಿ ಮಾತನಾಡಿ, ಬೋಧಕ-ಬೋಧಕೇತರ ಸಿಬ್ಬಂದಿಗಳು ವಿಶ್ವವಿದ್ಯಾಲಯಕ್ಕೆ ಎರಡು

ಮುಖಗಳಿದ್ದಂತೆ. ಅದರಲ್ಲಿ ಒಂದಕ್ಕೆ ಹೊಡೆತ ಬಿದ್ದರೂ ವಿವಿಯ ಆಡಳಿತ ಯಂತ್ರವು ಕುಸಿದು ಬೀಳುತ್ತದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿ, ಸಂಶೋಧನೆಯಲ್ಲಿ ಪರಸ್ಪರರ ಮಧ್ಯೆ ಸಂವಾದದ ಮಾಡದಿರುವ ಸಮಸ್ಯೆ ಉಲ್ಬಣವಾಗುತ್ತಿದೆ ಎಂದು ಹೇಳಿದರು.

ಈ ಸಂಧರ್ಭದಲ್ಲಿ ಮಹಿಳಾ ವಿವಿ ಕುಲಸಚಿವ ಪ್ರೊ.ಕೆ.ಪಿ.ಶ್ರೀನಾಥ ಮಾತನಾಡಿದರು. ಕಾರ್ಯಕ್ರಮದಲ್ಲಿ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿನಿಯರು ಹಾಗೂ ಮತ್ತಿತರರು ಭಾಗವಹಿಸಿದ್ದರು.

ಆರ್ಥಿಕ ಅಧಿಕಾರಿ ಪ್ರೊ.ಆರ್.ಸುನಂದಮ್ಮ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಯೋಜನೆ, ಮೇಲ್ವಿಚಾರಣೆ ಹಾಗೂ ಮೌಲ್ಯಮಾಪನ ಮಂಡಳಿಯ ಪ್ರೊ.ವಿಜಯಾ ಕೋರಿಶೆಟ್ಟಿ ಸ್ವಾಗತಿಸಿ, ಪರಿಚಯಿಸಿದರು. ಪ್ರದರ್ಶಕ ಕಲೆಗಳ ವಿಭಾಗದ ವಿದ್ಯಾರ್ಥಿನಿಯರು ಮಹಿಳಾ ಗೀತೆ ಹಾಡಿದರು. ದೈಹಿಕ ಶಿಕ್ಷಣ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಹನುಮಂತಯ್ಯ ಪೂಜಾರಿ ನಿರೂಪಿಸಿದರು. ಮೌಲ್ಯಮಾಪನ ಕುಲಸಚಿವ ಪ್ರೊ.ವಿ.ವಿ.ಮಳಗಿ ವಂದಿಸಿದರು.

ಫೋಟೊ ಕ್ಯಾಪ್ಷೆನ್:

1) ಅಧ್ಯಯನ ಕೇಂದ್ರದಲ್ಲಿ ವಿವಿಯ 14ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ನವದೆಹಲಿಯ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯ ಕನ್ನಡ ಭಾಷಾ ಪೀಠದ ಪ್ರಾಧ್ಯಾಪಕ ಪ್ರೊ.ಪುರುಷೋತ್ತಮ ಬಿಳಿಮಲೆ ಉದ್ಘಾಟಿಸಿದರು.

2) ಅಧ್ಯಯನ ಕೇಂದ್ರದಲ್ಲಿ ವಿವಿಯ 14ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ 'ಕನ್ನಡ ಸಂಶೋಧನೆ ಹಿಡಿಯಬೇಕಿರುವ ಹೊಸ ಹಾದಿಗಳು' ವಿಷಯದ ಕುರಿತು ಎಂದು ನವದೆಹಲಿಯ ಜವಾಹರಲಾಲ್ ನೆಹರೂ ವಿಶ್ವವಿದ್ಯಾಲಯ ಕನ್ನಡ ಭಾಷಾ ಪೀಠದ ಪ್ರಾಧ್ಯಾಪಕ ಪ್ರೊ.ಪುರುಷೋತ್ತಮ ಬಿಳಿಮಲೆ ಮಾತನಾಡಿದರು.

3) ಅಧ್ಯಯನ ಕೇಂದ್ರದಲ್ಲಿ ವಿವಿಯ 14ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿದ್ದ ಮಹಿಳಾ ವಿವಿ ಕುಲಪತಿ ಪ್ರೊ.ಸಬಿಹಾ ಮಾತನಾಡಿದರು.

4) ಅಧ್ಯಯನ ಕೇಂದ್ರದಲ್ಲಿ ವಿವಿಯ 14ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಅತಿಥಿಯಾಗಿ ಆಗಮಿಸಿದ್ದ ಮಹಿಳಾ ವಿವಿ  ಮಹಿಳಾ ವಿವಿ ಸಿಂಡಿಕೇಟ್ ಸದಸ್ಯ ರವೀಂದ್ರ ಭಾವಿಕಟ್ಟಿ ಮಾತನಾಡಿದರು.



